# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎಸ್.ಗುರುಸಿದ್ದಪ್ಪ, ಅಧ್ಯಕ್ಷರು, ಯರಬಳ್ಳಿ ಗ್ರಾಮ ಪಂಚಾಯತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ರವರ ಪತ್ರ ಸಂಖ್ಯೆ: ಜಿಜಿಪಂ:ಯೋವಿ:14ನೇಹಕಾ:ಸಿಆರ್:8:17-18, ದಿನಾಂಕ:25.05.2018.
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ:29-06-2018 ರ ಕಾರಣ ಕೇಳುವ ನೋಟೀಸು.
3. ಸರ್ಕಾರದ ಸಮಸಂಖ್ಯೆಯ ವಿಚಾರಣಾ ನೋಟೀಸ್, ದಿನಾಂಕ:28-07-2018.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ ರವರ ಪ್ರಸ್ತಾವನೆಯಲ್ಲಿ ಸದರಿ ಪತ್ರದಲ್ಲಿ ಮುಖ್ಯ ಲೆಕ್ಕಾಧಿಕಾರಿ, ಜಿ.ಪಂ. ಚಿತ್ರದುರ್ಗ ರವರು ಯರಬಳ್ಳಿ ಗ್ರಾಮ ಪಂಚಾಯತಿಯ 2015-16 ರಿಂದ 2017-18 ರವರೆಗಿನ ವಿಶೇಷ ಲೆಕ್ಕ ತಪಾಸಣಾ ವರದಿಯನ್ನು ಸಲ್ಲಿಸಿದ್ದು, ವರದಿಯ ಕಂಡಿಕೆ 14, 15 ರನ್ವಯ ಒಟ್ಟು ರೂ.16,83,772/-ಗಳನ್ನು ಆಕ್ಷೇಪಣೆಯಲ್ಲಿರಿಸಿದ್ದು, ಹಲವು ನ್ಯೂನತೆಗಳನ್ನು ಉಲ್ಲೇಖಿಸಿ, ಈ ಕೆಳಕಂಡ ನ್ಯೂನತೆಗಳ ಬಗ್ಗೆ ನಿಯಮಾನುಸಾರ ಆಡಳಿತಾತ್ಮಕ ಕ್ರಮ ಕೈಗೊಳ್ಳಬಹುದಾಗಿದೆ ಎಂಬುದ್ದಾಗಿ ಶಿಫಾರಸ್ಸು ಮಾಡಿರುತ್ತಾರೆ.

- 14ನೇ ಹಣಕಾಸು ಯೋಜನೆಯ ಮಾರ್ಗಸೂಚಿಯನ್ನು & ಸುತ್ತೋಲೆಗಳನ್ನು ಉಲ್ಲಂಘಿಸಿದಂತಾಗಿದೆ.
- ಅನುಮೋದಿತ ಕ್ರಿಯಾ ಯೋಜನೆಯಲ್ಲಿಲ್ಲದ ಕಾಮಗಾರಿಗಳಿಗೆ & ಇತರೆ ಬಾಬ್ತುಗಳಿಗೆ ವೆಚ್ಚಭರಿಸಿ, 14ನೇ ಹಣಕಾಸು ಯೋಜನೆಯ ಅನುದಾನವನ್ನು ಮಾರ್ಗಪಲ್ಲಟ ಮಾಡಿದಂತಾಗಿದೆ.
- 14ನೇ ಹಣಕಾಸು ಯೋಜನೆಯ ಮಾರ್ಗಸೂಚಿಗಳು & ಸುತ್ತೋಲೆಗಳನ್ವಯ ಕ್ರಿಯಾ ಯೋಜನೆಯನ್ನು ತಯಾರಿಸಿ, ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಮಂಡಿಸಿ, ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು, ಅನುಮೋದಿತ ಕ್ರಿಯಾ ಯೋಜನೆಯಲ್ಲಿನ ಕಾಮಗಾರಿಗಳಿಗೆ ಹಾಗೂ ಇತರೆ ಬಾಬ್ತುಗಳಿಗೆ ಸರ್ಕಾರವು ಬಿಡುಗಡೆ ಮಾಡಿರುವ ಅನುದಾನವನ್ನು ನಿಗಧಿತ ಬಾಬ್ತುಗಳಿಗೆ ನಿಗಧಿತ ಅವಧಿಯೊಳಗೆ ವೆಚ್ಚ ಭರಿಸದಿರುವುದು.
- 14ನೇ ಹಣಕಾಸು ಯೋಜನೆಯಡಿ ಕೈಗೊಂಡ ಕಾಮಗಾರಿ ಬಿಲ್ಲುಗಳ ಮೊತ್ತವನ್ನು ಸಂದಾಯ ಮಾಡುವಾಗ, ಕಟಾಯಿಸಲಾಗುವ ಶಾಸನಬದ್ಧ ತೆರಿಗೆಗಳನ್ನು ನಿಗಧಿತ ಅವಧಿಯೊಳಗೆ, ಸಂಬಂಧಪಟ್ಟ ತೆರಿಗೆಗಳ ಲೆಕ್ಕ ಶೀರ್ಷಿಕೆಗಳಿಗೆ ಜಮಾ ಮಾಡಿ, ರಿಟರ್ನ್ಸ್ ಫೈಲ್ ಮಾಡಿರುವುದಿಲ್ಲ.
- 14ನೇ ಹಣಕಾಸು ಯೋಜನೆಯ ಲೆಕ್ಕ ಪತ್ರಗಳ ನಿರ್ವಹಣೆಯಲ್ಲಿ ಇನ್ನೂ ಹೆಚ್ಚಿನ ಸುಧಾರಣೆಯಾಗಬೇಕಾಗಿರುತ್ತದೆ. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು ಲೆಕ್ಕ ಪತ್ರಗಳನ್ನು ನಿಯಮಾನುಸಾರ ನಿರ್ವಹಿಸುವುದು.

ಮುಂದುವರೆದು, ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಬೆಂಗಳೂರು ರವರ ವರದಿಯಲ್ಲಿ 1)ಹಿರಿಯೂರು ತಾಲ್ಲೂಕು ಗೊಲ್ಲಹಳ್ಳಿ ಗ್ರಾಮದ ಜಾಗೃತಿ ಶಿಕ್ಷಣ ಸಂಸ್ಥೆ ಮುಂಭಾಗದಿಂದ ಗೊಲ್ಲಹಳ್ಳಿ ಓವರ್ ಹೆಡ್ ಟ್ಯಾಂಕರ್‌ವರೆಗೆ ಪೈಪ್‌ಲೈನ್ ಅಳವಡಿಸುವುದು-ರೂ.2.14.936/-ಗಳು ಅನುಮೋದಿತ ತುಂಡು ಗುತ್ತಿಗೆ ಮೊತ್ತ 2)ಹಿರಿಯೂರು ತಾಲ್ಲೂಕು ಗೊಲ್ಲಹಳ್ಳಿ ಗ್ರಾಮದ ಜಾಗೃತಿ ಶಿಕ್ಷಣ ಸಂಸ್ಥೆ ಮುಂಭಾಗದಿಂದ ಗೊಲ್ಲಹಳ್ಳಿ ಓವರ್ ಹೆಡ್ ಟ್ಯಾಂಕರ್‌ವರೆಗೆ ಪೈಪ್‌ಲೈನ್ ಅಳವಡಿಸುವುದು-ರೂ.4.49.454/-ಗಳು ಅನುಮೋದಿತ ತುಂಡು ಗುತ್ತಿಗೆ ಮೊತ್ತ - ಈ ಎರಡು ಕಾಮಗಾರಿಗಳ ಬಾಬ್ತು ಸರ್ಕಾರದ ಮಾರ್ಗಸೂಚಿ ಮತ್ತು ನಿಯಮಗಳ ಉಲ್ಲಂಘನೆ ಮಾಡಿರುವುದಾಗಿ ಕಂಡುಬಂದಿರುವ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಗಳಿಗೆ ನೀಡಿರುವ ತುಂಡು ಗುತ್ತಿಗೆ ಅನುಮೋದನೆ ಮತ್ತು ಕರಾರನ್ನು ರದ್ದುಪಡಿಸಬಹುದು ಎಂದು ತಿಳಿಸಿರುತ್ತಾರೆ.

ಆದುದರಿಂದ ಸದರಿ ಪ್ರಕರಣದಲ್ಲಿ ಯರಬಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಈ ಮೇಲ್ಕಂಡ ಕಾಮಗಾರಿಗಳಲ್ಲಿ 14ನೇ ಹಣಕಾಸು ಯೋಜನೆಯ ಮಾರ್ಗಸೂಚಿ & ಸುತ್ತೋಲೆಗಳನ್ನು ಉಲ್ಲಂಘನೆ ಮಾಡಿರುವುದಾಗಿ ಕಂಡುಬಂದಿರುವ ಹಿನ್ನೆಲೆಯಲ್ಲಿ ಸದರಿ ಕಾಮಗಾರಿಗಳಿಗೆ ನೀಡಿರುವ ತುಂಡು ಗುತ್ತಿಗೆ ಅನುಮೋದನೆ ಮತ್ತು ಕರಾರನ್ನು ರದ್ದುಪಡಿಸಿರುವುದಾಗಿ ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ ಬೆಂಗಳೂರು ಇವರು ತಿಳಿಸಿರುವ ಮೇರೆಗೆ ಮತ್ತು ಸದರಿ ಗ್ರಾಮ ಪಂಚಾಯತಿಯ ವಿಶೇಷ ಲೆಕ್ಕ ತನಿಖಾ ವರದಿಯಲ್ಲಿ ರೂ.16.83.772/-ಗಳನ್ನು ಆಕ್ಷೇಪಣೆಯಲ್ಲಿರಿಸಿರುವ ಹಿನ್ನೆಲೆಯಲ್ಲಿ ಶ್ರೀ ಎಸ್.ಗುರುಸಿದ್ದಪ್ಪ, ಅಧ್ಯಕ್ಷರು, ಯರಬಳ್ಳಿ ಗ್ರಾಮ ಪಂಚಾಯಿತಿ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ರಂತೆ ಸದರಿಯವರ ಸದಸ್ಯತ್ವ ಮತ್ತು ಅಧ್ಯಕ್ಷ ಸ್ಥಾನವನ್ನು ರದ್ದುಗೊಳಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಶ್ರೀ ಎಸ್.ಗುರುಸಿದ್ದಪ್ಪ, ಅಧ್ಯಕ್ಷರು, ಯರಬಳ್ಳಿ ಗ್ರಾಮ ಪಂಚಾಯಿತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ರವರಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಗೊಳಿಸಲಾಗಿದ್ದು, ಆದರೆ ಸದರಿ ಕಾರಣ ಕೇಳುವ ನೋಟೀಸಿಗೆ ಆಪಾದಿತ ಅಧ್ಯಕ್ಷರು ಲಿಖಿತ ಉತ್ತರವನ್ನು ಸಲ್ಲಿಸಿರುವುದಿಲ್ಲ.

ಮೇಲೆ ಓದಲಾದ (3) ರನ್ವಯ ಶ್ರೀ ಎಸ್.ಗುರುಸಿದ್ದಪ್ಪ, ಅಧ್ಯಕ್ಷರು, ಯರಬಳ್ಳಿ ಗ್ರಾಮ ಪಂಚಾಯಿತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರನ್ನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ರವರ ನ್ಯಾಯಲಯದಲ್ಲಿ ವಿಚಾರಣೆ ಕರೆಯಲಾಗಿ ದಿನಾಂಕ:04-08-2018 ರಂದು ಜರುಗಿದ ವಿಚಾರಣೆಯಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಯರಬಳ್ಳಿ ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯತಿ ಅಧಿಕಾರಿಗಳು ಆಪಾದಿತ ಅಧ್ಯಕ್ಷರು ಹಾಜರಾಗಿರುತ್ತಾರೆ. ಅಧ್ಯಕ್ಷರು ತಮ್ಮ ಹೇಳಿಕೆಯನ್ನು ನೀಡಿರುತ್ತಾರೆ.

ಸರ್ಕಾರವು ಈ ಪ್ರಕರಣದಲ್ಲಿ ಲಭ್ಯವಿರುವ ಎಲ್ಲಾ ದಾಖಲೆಗಳನ್ನು ಪರಿಶೀಲಿಸಲಾಗಿ, ಯರಬಳ್ಳಿ ಗ್ರಾಮ ಪಂಚಾಯತಿ 14ನೇ ಹಣಕಾಸು ಯೋಜನೆಯಲ್ಲಿ 1) ಹಿರಿಯೂರು ತಾಲ್ಲೂಕು ಗೊಲ್ಲಹಳ್ಳಿ ಗ್ರಾಮದ ಜಾಗೃತಿ ಶಿಕ್ಷಣ ಸಂಸ್ಥೆ ಮುಂಭಾಗದಿಂದ ಗೊಲ್ಲಹಳ್ಳಿ ಓವರ್ ಹೆಡ್ ಟ್ಯಾಂಕರ್‌ವರೆಗೆ ಪೈಪ್‌ಲೈನ್ ಅಳವಡಿಸುವುದು-ರೂ.2.14.936/-ಗಳು ಅನುಮೋದಿತ ತುಂಡು ಗುತ್ತಿಗೆ ಮೊತ್ತ 2) ಹಿರಿಯೂರು ತಾಲ್ಲೂಕು ಗೊಲ್ಲಹಳ್ಳಿ ಗ್ರಾಮದ ಜಾಗೃತಿ ಶಿಕ್ಷಣ ಸಂಸ್ಥೆ ಮುಂಭಾಗದಿಂದ ಗೊಲ್ಲಹಳ್ಳಿ ಓವರ್ ಹೆಡ್ ಟ್ಯಾಂಕರ್‌ವರೆಗೆ ಪೈಪ್‌ಲೈನ್ ಅಳವಡಿಸುವುದು-ರೂ.4,49,454/-ಗಳಲ್ಲಿ ಮಾರ್ಗಸೂಚಿ & ಸುತ್ತೋಲೆಗಳನ್ನು ಉಲ್ಲಂಘನೆ ಮಾಡಿರುವುದಾಗಿ ಕಂಡುಬಂದಿರುವ ಹಿನ್ನೆಲೆಯಲ್ಲಿ, ಸದರಿ ಕಾಮಗಾರಿಗಳಿಗೆ ನೀಡಿರುವ ತುಂಡು ಗುತ್ತಿಗೆ ಅನುಮೋದನೆ ಮತ್ತು ಕರಾರನ್ನು ರದ್ದುಪಡಿಸಿರುವುದಾಗಿ ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಂಗಳೂರು ಇವರು ತಿಳಿಸಿರುವ ಮೇರೆಗೆ ಮತ್ತು ಸದರಿ ಗ್ರಾಮ ಪಂಚಾಯಿತಿಯ ವಿಶೇಷ ಲೆಕ್ಕ ತನಿಖಾ ವರದಿಯಲ್ಲಿ ರೂ.16,83,772/-ಗಳನ್ನು ಆಕ್ಷೇಪಣೆಯಲ್ಲಿರಿಸಿರುವ ಹಿನ್ನೆಲೆಯಲ್ಲಿ ಶ್ರೀ ಎಸ್.ಗುರುಸಿದ್ದಪ್ಪ, ಅಧ್ಯಕ್ಷರು, ಯರಬಳ್ಳಿ ಗ್ರಾಮ ಪಂಚಾಯಿತಿ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ರಂತೆ ಸದರಿಯವರ ಯರಬಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವವನ್ನು ರದ್ದುಪಡಿಸುವಂತೆ ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 533 ಗ್ರಾಪಂಅ 2018 ಬೆಂಗಳೂರು, ದಿನಾಂಕ:05-09-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಯರಬಳ್ಳಿ ಗ್ರಾಮ ಪಂಚಾಯತಿ 14ನೇ ಹಣಕಾಸು ಯೋಜನೆಯಲ್ಲಿ 1) ಹಿರಿಯೂರು ತಾಲ್ಲೂಕು ಗೊಲ್ಲಹಳ್ಳಿ ಗ್ರಾಮದ ಜಾಗೃತಿ ಶಿಕ್ಷಣ ಸಂಸ್ಥೆ ಮುಂಭಾಗದಿಂದ ಗೊಲ್ಲಹಳ್ಳಿ ಓವರ್ ಹೆಡ್ ಟ್ಯಾಂಕರ್‌ವರೆಗೆ ಪೈಪ್‌ಲೈನ್ ಅಳವಡಿಸುವುದು-ರೂ.2.14.936/-ಗಳು ಅನುಮೋದಿತ ತುಂಡು ಗುತ್ತಿಗೆ ಮೊತ್ತ 2) ಹಿರಿಯೂರು ತಾಲ್ಲೂಕು ಗೊಲ್ಲಹಳ್ಳಿ ಗ್ರಾಮದ ಜಾಗೃತಿ ಶಿಕ್ಷಣ ಸಂಸ್ಥೆ ಮುಂಭಾಗದಿಂದ

ಗೊಲ್ಲಹಳ್ಳಿ ಓವರ್ ಹೆಡ್ ಟ್ಯಾಂಕರ್‌ವರೆಗೆ ಪೈಪ್‌ಲೈನ್ ಅಳವಡಿಸುವುದು-ರೂ.4,49,454/-ಗಳಲ್ಲಿ ಮಾರ್ಗಸೂಚಿ & ಸುತ್ತೋಲೆಗಳನ್ನು ಉಲ್ಲಂಘನೆ ಮಾಡಿರುವುದಾಗಿ ಕಂಡುಬಂದಿರುವ ಹಿನ್ನೆಲೆಯಲ್ಲಿ, ಸದರಿ ಕಾಮಗಾರಿಗಳಿಗೆ ನೀಡಿರುವ ತುಂಡು ಗುತ್ತಿಗೆ ಅನುಮೋದನೆ ಮತ್ತು ಕರಾರನ್ನು ರದ್ದುಪಡಿಸಿರುವುದಾಗಿ ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಬೆಂಗಳೂರು ಇವರು ತಿಳಿಸಿರುವ ಮೇರೆಗೆ ಮತ್ತು ಸದರಿ ಗ್ರಾಮ ಪಂಚಾಯಿತಿಯ ವಿಶೇಷ ಲೆಕ್ಕ ತನಿಖಾ ವರದಿಯಲ್ಲಿ ರೂ.16,83,772/-ಗಳನ್ನು ಆಕ್ಷೇಪಣೆಯಲ್ಲಿರಿಸಿರುವ ಹಿನ್ನೆಲೆಯಲ್ಲಿ ಶ್ರೀ ಎಸ್.ಗುರುಸಿದ್ದಪ್ಪ, ಅಧ್ಯಕ್ಷರು, ಯರಬಳ್ಳಿ ಗ್ರಾಮ ಪಂಚಾಯಿತಿ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ರಂತೆ ಯರಬಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಸದಸ್ಯತ್ವವನ್ನು ರದ್ದುಪಡಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

6/9/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ ಚಿತ್ರದುರ್ಗ, ಚಿತ್ರದುರ್ಗ ಜಿಲ್ಲೆ.
3. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹಿರಿಯೂರು, ಚಿತ್ರದುರ್ಗ ಜಿಲ್ಲೆ.
4. ಶ್ರೀ ಎಸ್.ಗುರುಸಿದ್ದಪ್ಪ, ಅಧ್ಯಕ್ಷರು, ಯರಬಳ್ಳಿ ಗ್ರಾಮ ಪಂಚಾಯಿತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
5. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಯರಬಳ್ಳಿ ಗ್ರಾಮ ಪಂಚಾಯಿತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ.
6. ಗಣಕ ಶಾಖೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿಯನ್ನು ಮಾಹಿತಿಗಾಗಿ:

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.